# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು

## PAPER CLIPPINGS

41

ಇಲಾಖೆ / ವಿಷಯ : DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 19/11/20

---

# ಚುನಾವಣೆ ಮುಂದೂಡಿಕೆಗೆ ಒತ್ತಡ

ವಿ.ವಾ. 19-11-20

ಬೆಂಗಳೂರು: ಕರೊನಾ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯಿತಿ ಚುನಾವಣೆ ಸದ್ಯಕ್ಕೆ ಬೇಡ, ಏನಾದರೂ ಮಾಡಿ ಮುಂದೂಡಲು ಪ್ರಯತ್ನಿಸಿ ಎಂದು ಸರ್ಕಾರದ ಮೇಲೆ ಪಕ್ಷಾತೀತ ಒತ್ತಡ ಇದೆ ಎಂಬ ಸಂಗತಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಕೆ.ಎಸ್. ಈಶ್ವರಪ್ಪ ಬಹಿರಂಗಪಡಿಸಿದ್ದಾರೆ.

ಸುದ್ದಿಗಾರರಿಗೆ ಬುಧವಾರ ಪ್ರತಿಕ್ರಿಯೆ ನೀಡಿದ ಅವರು, ರಾಜ್ಯದ ಎಲ್ಲ ಕಡೆಯಿಂದ ದೂರವಾಣಿ ಕರೆ ಬರುತ್ತಿದ್ದು ಚುನಾವಣೆ ಮುಂದೆ ಹಾಕಿಸಿ ಎಂದು ಮನವಿ ಮಾಡುತ್ತಿದ್ದಾರೆ. ನ್ಯಾಯಾಲಯ ಚುನಾವಣೆಗೂ ಸರ್ಕಾರಕ್ಕೂ ಸಂಬಂಧವಿಲ್ಲ, ಏನಾದರೂ ಅಗತ್ಯವಿದ್ದರೆ ರಾಜ್ಯಪಾಲರನ್ನು ಕೇಳಿ ಎಂದು ಚುನಾವಣಾ ಆಯೋಗಕ್ಕೆ ಹೇಳಿದೆ. ಹೀಗಿರುವಾಗ ನಾವೇನು ಮಾಡಲು ಸಾಧ್ಯ ಎಂದರು.

ಚುನಾವಣೆ ಆಯೋಗ ಚುನಾವಣೆ ನಡೆಸುವ ನಿಟ್ಟಿನಲ್ಲಿ ವೇಗವಾಗಿ ಕೆಲಸ ಮಾಡುತ್ತಿದೆ. ಸರ್ಕಾರ ಚುನಾವಣೆ ಮುಂದೂಡಲು ಪ್ರಯತ್ನಿಸುವ ಯಾವುದೇ ಚಿಂತನೆ ಇಲ್ಲ. ಚುನಾವಣೆ ಮುಂದೂಡುವಂತೆ ಯಾರಾದರೂ ಸುಪ್ರಿಂಗೆ ಹೋಗಬಹುದು ಎಂದು ಅಭಿಪ್ರಾಯಪಟ್ಟರು.

ಕರೊನಾ ನಡುವೆಯೇ ಬಿಹಾರದಲ್ಲೇನೋ ಚುನಾವಣೆ ನಡೆದಿದೆ. ಆದರೆ, ಮುಂದೇನಾಗಿದೆ ಎಂದು ಯಾರಿಗೂ ಗೊತ್ತಿಲ್ಲ. ಕರ್ನಾಟಕದಲ್ಲಿ ಕರೊನಾ ಪ್ರಮಾಣ ತಗ್ಗಿದಂತೆ ಕಂಡಿರಬಹುದು. ಆದರೆ, ಚುನಾವಣೆ ನಡೆಸಿದರೆ ಪ್ರತಿ ಮನೆಗೆ ಪ್ರಚಾರ ಮಾಡುವವರು ನಾಲ್ಕೈದು ಬಾರಿಯಾದರೂ ತೆರಳುತ್ತಾರೆ. ಹೀಗಾಗಿ ಚುನಾವಣೆಯಿಂದಾಗಿ ಮಾರಕವಾದೀತೆಂಬ ಭಯ ಇದೆ ಎಂದರು.

## ಮಾಹಿತಿ ಕೋರಿದ ಚುನಾವಣಾ ಆಯೋಗ

ಬೆಂಗಳೂರು: ಗ್ರಾಮ ಪಂಚಾಯಿತಿ ಚುನಾವಣೆಯನ್ನು ನಡೆಸುವುದಕ್ಕೆ ಸಂಬಂಧಿಸಿದಂತೆ ರಾಜ್ಯ ಚುನಾವಣಾ ಆಯೋಗ ಜಿಲ್ಲಾಧಿಕಾರಿಗಳಿಂದ ಮಾಹಿತಿ ಕೋರಿದೆ. ಜಿಲ್ಲಾಧಿಕಾರಿಗಳ ಜತೆ ವಿಡಿಯೋ ಸಂವಾದ ನಡೆಸಿದ್ದ ಚುನಾವಣಾ ಆಯೋಗದ ಆಯುಕ್ತ ಬಿ. ಬಸವರಾಜು ಪ್ರತಿ ಜಿಲ್ಲೆಯಲ್ಲಿ ಎರಡು ಹಂತದಲ್ಲಿ ಚುನಾವಣೆ ನಡೆಸುವ ನಿರ್ಧಾರ ಮಾಡಿದ್ದರು. ಬುಧವಾರ ಎಲ್ಲ ಜಿಲ್ಲಾಧಿಕಾರಿಗಳು ಪತ್ರ ಬರೆದಿರುವ ರಾಜ್ಯ ಚುನಾವಣಾ ಆಯೋಗ ಮೊದಲ ಹಂತದಲ್ಲಿ ಯಾವ ತಾಲೂಕು, 2ನೇ ಹಂತದಲ್ಲಿ ಯಾವ ತಾಲೂಕಿನಲ್ಲಿ ಚುನಾವಣೆ ನಡೆಸಿದರೆ ಅನುಕೂಲ ಎಂಬ ಮಾಹಿತಿ ನೀಡುವಂತೆ ಸೂಚಿಸಿದೆ.